ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ 01 V3 ಸಿಡಿಸಿ (2) 2018-19 /6635

ನಿರ್ದೇಶಕರ ಕಛೇರಿ
ಅರಮನೆ ರಸ್ತೆ
ಬೆಂಗಳೂರು 560 001
ದಿ: 22-03-2019

**-:ಸುತ್ತೋಲೆ:-**

ವಿಷಯ: AICTE Quality Improvement Scheme(AQIS)ಗೆ ಹಾಗೂ MODROB ಸ್ಕೀಮ್‌ಗೆ ಸಂಬಂಧಿಸಿದಂತೆ ಮಾಹಿತಿ ನೀಡುವ ಬಗ್ಗೆ.

ಉಲ್ಲೇಖ: ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಇವರು ದಿನಾಂಕ:22-03-2019ರಂದು ನೀಡಿದ ಮೌಖಿಕ ಸೂಚನೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಎಐಸಿಟಿಇ ನವದೆಹಲಿ, ಇವರು AICTE Quality Improvement Scheme(AQIS) ಅಡಿಯಲ್ಲಿ 2015-16ನೇ ಸಾಲಿನಿಂದ 2018-19ನೇ ಸಾಲಿನವರೆಗೆ ಹಾಗೂ 2009-2010ನೇ ಸಾಲಿನಿಂದ 2018-19ನೇ ಸಾಲಿನವರೆಗೆ MODROB ಸ್ಕೀಮ್‌ನ ಅಡಿಯಲ್ಲಿ. ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ಶಿಕ್ಷಣದ ಗುಣಮಟ್ಟವನ್ನು ವೃದ್ಧಿಸಿಕೊಳ್ಳುವ ನಿಟ್ಟಿನಲ್ಲಿ ಆರ್ಥಿಕ ಸೌಲಭ್ಯವನ್ನು ನೀಡುವ ಸಂಬಂಧ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ /ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಯಾವ ಯಾವ ಯೋಜನೆಗಳು ಅನುಮೋದನೆಗೊಂಡು, ಎಷ್ಟು ಅನುದಾನ ಬಿಡುಗಡೆಯಾಗಿರುತ್ತದೆ ಹಾಗೂ ಯೋಜನೆಗಳಿಗೆ ಉಪಯೋಗಿಸಿಕೊಂಡ ಅನುದಾನದ ಮಾಹಿತಿಯನ್ನು ಹಾಗೂ ಈ ದಿನಾಂಕಕ್ಕೆ ಅನ್ವಯಿಸುವಂತೆ ಯೋಜನೆಗಳ ಪ್ರಗತಿಯ ವಿವರಗಳನ್ನು, ಸದರಿ ಶೀರ್ಷಿಕೆಯೊಂದಿನ ಲಿಂಕ್‌ನಲ್ಲಿರುವ ಗೂಗಲ್ ಫಾರಂನಲ್ಲಿ ದಿನಾಂಕ:27-3-2019ರ ಸಂಜೆ 5.30 ಘಂಟೆಯೊಳಗೆ ಭರ್ತಿ ಮಾಡಲು ಹಾಗೂ ಕ್ರೋಢಿಕರಿಸಿ ಸಿದ್ದಪಡಿಸಿದ ಪ್ರತಿಯನ್ನು ನಿರ್ದೇಶನಾಲಯಕ್ಕೆ ತಪ್ಪದೆ ಕಳುಹಿಸುವಂತೆ ಈ ಮೂಲಕ ತಿಳಿಸಲಾಗಿದೆ.

Click to enter details:

ನಿರ್ದೇಶಕರು

ಇವರಿಗೆ:

1. ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ/ಇಂಜಿನಿಯರಿಂಗ್ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
2. ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, 2ನೇ ಮಹಡಿ, ಬೆಂಗಳೂರು ಇವರಿಗೆ ಡಿಟಿಇ ವೆಬ್ ಸೈಟ್ ನಲ್ಲಿ ಪ್ರಕಟಿಸಲು ಮುಂದಿನ ಕ್ರಮಕ್ಕಾಗಿ.